**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/193/ಪದವಿ ಶುಲ್ಕ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560 001.
ದಿನಾಂಕ: 30.05.2023.

**ಸುತ್ತೋಲೆ**

ವಿಷಯ: 2023-24 ನೇ ಸಾಲಿಗೆ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಪದವಿ ಕೋರ್ಸಗಳಿಗೆ ಶುಲ್ಕ ನಿಗಧಿಗೊಳಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 105 ಡಿಸಿಇ 2023 (ಇ), ದಿನಾಂಕ: 02.05.2023.

*************

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, 2023-24 ನೇ ಶೈಕ್ಷಣಿಕ ಸಾಲಿಗೆ ಎಲ್ಲಾ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಪದವಿ ಕೋರ್ಸುಗಳಿಗೆ ಶುಲ್ಕವನ್ನು ಪರಿಷ್ಕರಿಸುವ ಸಂಬಂಧ 2022-23 ನೇ ಸಾಲಿನಲ್ಲಿ ನಿಗಧಿಗೊಳಿಸಿದ ಶುಲ್ಕವನ್ನೇ 2023-24 ನೇ ಸಾಲಿಗೂ ಮುಂದುವರೆಸಲು ಉಲ್ಲೇಖಿತ ಆದೇಶದಲ್ಲಿ ಅನುಮತಿ ನೀಡಲಾಗಿದೆ. ಆದ್ದರಿಂದ, ಉಲ್ಲೇಖಿತ ಆದೇಶದನ್ವಯ ಈ ಕೆಳಕಂಡಂತೆ ಶುಲ್ಕಗಳನ್ನು 2023-24 ನೇ ಸಾಲಿಗೆ ವಸೂಲಿ ಮಾಡಲು ಪ್ರಾಂಶುಪಾಲರುಗಳಿಗೆ ಅನುಮತಿ ನೀಡಲಾಗಿದೆ.

| ಕ್ರ.ಸಂ. | ಶುಲ್ಕದ ವಿವರ | ಶುಲ್ಕ (ರೂ.) |
|---|---|---|
| 01. | ಅರ್ಜಿ ಶುಲ್ಕ | ಉಚಿತ |
| 02. | ಪ್ರವೇಶ ಶುಲ್ಕ | 80.00 |
| 03. | ಬೋಧನಾ ಶುಲ್ಕ | 940.00 |
| 04. | ಪ್ರಯೋಗಾಲಯ ಶುಲ್ಕ | 260.00 |
| 05. | ವೈದ್ಯಕೀಯ ತಪಾಸಣಾ ಶುಲ್ಕ | 30.00 |
| 06. | ವರ್ಗಾವಣೆ ಪತ್ರ ಶುಲ್ಕ | 40.00 |
| 07. | ವಿದ್ಯಾಭ್ಯಾಸ ಪ್ರಮಾಣ ಪತ್ರ ಶುಲ್ಕ | 20.00 |
| 08. | ಗ್ರಂಥಾಲಯ ಶುಲ್ಕ (ಬೈಂಡಿಂಗ್ ಸೇರಿ) | 100.00 |
| 09. | ವಾಚನಾಲಯ ಶುಲ್ಕ | 70.00 |
| 10. | ಕ್ರೀಡಾ ಶುಲ್ಕ | 100.00 |
| 11. | ಸಾಂಸ್ಕೃತಿಕ ಚಟುವಟಿಕೆ ಶುಲ್ಕ | 200.00 |
| 12. | ಕಾಲೇಜು ಮ್ಯಾಗಜಿನ್ ಶುಲ್ಕ | 100.00 |
| 13. | ಪರಿಚಯ ಪುಸ್ತಕ ಶುಲ್ಕ | 50.00 |
| 14. | ಗುರುತಿನ ಚೀಟಿ | 50.00 |
| 15. | ಅ) ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ. (KSTBF)<br>ಆ) ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ.(KSSWF)<br>ಇ) ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ ನಿಧಿ (NWTF) | 25.00<br>25.00<br>20.00 |
| 16. | ದಿ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್‌ನ ರೋವರ್ ಮತ್ತು ರೇಂಜರ್ ಘಟಕ ಪ್ರಾರಂಭಿಸಲು ಹಾಗೂ ಘಟಕಗಳ ಚಟುವಟಿಕೆ ಶುಲ್ಕ<br>(ಸರ್ಕಾರಿ ಆದೇಶ ಸಂಖ್ಯೆ: ಇಡಿ 46 ವಿವಿಧ 2010 ದಿನಾಂಕ:23.11.2011) | 50.00 |
| 17. | ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಶುಲ್ಕ<br>(ಸರ್ಕಾರಿ ಆದೇಶ ಸಂಖ್ಯೆ: ಇಡಿ 64 ವಿವಿಧ 2011 ದಿನಾಂಕ :22.12.2011) | 50.00 |
| 18. | ಎನ್.ಎಸ್.ಎಸ್. ಶುಲ್ಕ<br>ಅ) ಘಟಕ ಇಲ್ಲದ ಕಾಲೇಜುಗಳಲ್ಲಿ<br>ಆ) ಒಂದು ಘಟಕ ಇರುವ ಕಾಲೇಜುಗಳಲ್ಲಿ<br>(ಸರ್ಕಾರಿ ಆದೇಶ ಸಂಖ್ಯೆ:ಇಡಿ 11 ವಿವಿಧ 2015 ದಿನಾಂಕ: 04.05.2015) | <br>50.00<br>40.00 |

| | | |
|---|---|---|
| 19. | ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದ ಶುಲ್ಕಗಳು | ಆಯಾ ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದಂತೆ |

**ಷರತ್ತುಗಳು:**

1. ಆಯಾಯ ಕಾಲೇಜುಗಳ ಅರೆ ಸರ್ಕಾರಿ ಬ್ಯಾಂಕ್ ಖಾತೆಗಳನ್ನು ಪ್ರಾಂಶುಪಾಲರು ಹಾಗೂ ಸೇವೆಯಲ್ಲಿ ಹಿರಿಯರಾದ ಮತ್ತೊಬ್ಬ ಉಪನ್ಯಾಸಕರ ಹೆಸರಿನಲ್ಲಿ ಜಂಟಿ ಖಾತೆಗಳನ್ನಾಗಿ ಪರಿವರ್ತಿಸಿಕೊಳ್ಳಲು ಸೂಚಿಸಲಾಗಿದೆ.
2. ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ದಿ ಸ್ಕೌಟ್ಸ್ ಅಂಡ್ ಗೈಡ್ಸ್ ರೋವರ್ ಮತ್ತು ರೇಂಜರ್ ಘಟಕ, ಭಾರತ ರೆಡ್ ಕ್ರಾಸ್ ಸಂಸ್ಥೆ ಶುಲ್ಕ, ಎನ್.ಎಸ್.ಎಸ್. ಶುಲ್ಕ ಮುಂತಾದವುಗಳ ಶುಲ್ಕ ಸಂಗ್ರಹ ಹಾಗೂ ಅವುಗಳಿಗೆ ಸಂಬಂಧಿಸಿದಂತೆ ಸರ್ಕಾರಿ ಆದೇಶಗಳಲ್ಲಿ ತಿಳಿಸಿರುವ ಮಾರ್ಗಸೂಚಿ ಹಾಗೂ ನಿಬಂಧನೆಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.
3. ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿಯ ಮೊತ್ತವನ್ನು ಕಾಲೇಜು ಶಿಕ್ಷಣ ಇಲಾಖೆಯ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸದುಪಯೋಗಪಡಿಸಿಕೊಳ್ಳಲು ಸೂಚಿಸಲಾಗಿದೆ.
4. ಎಲ್ಲಾ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ವೈದ್ಯಕೀಯ ತಪಾಸಣೆಯನ್ನು ಕಡ್ಡಾಯವಾಗಿ ನಡೆಸತಕ್ಕದ್ದು ಹಾಗೂ ತಪಾಸಣೆಯನ್ನು ನಡೆಸಿರುವ ಬಗ್ಗೆ ಇಲಾಖೆಗೆ ವರದಿಯನ್ನು ಕಳುಹಿಸತಕ್ಕದ್ದೆಂದು ಸೂಚಿಸಲಾಗಿದೆ.
5. ಸರ್ಕಾರದ ಆದೇಶ ಸಂಖ್ಯೆ : ಇಡಿ 109 ಮಾಹಿತಿ 2014, ದಿನಾಂಕ : 06.06.2014 ರನ್ವಯ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಅನುದಾನಿತ ಕೋರ್ಸ್ / ವಿಷಯಗಳಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿನಿಯರಿಗೆ ಬೋದನಾ ಶುಲ್ಕ ಮತ್ತು ಪ್ರಯೋಗಾಲಯ ಶುಲ್ಕ ವಿನಾಯಿತಿಯನ್ನು ನೀಡಲಾಗಿದೆ.
6. ಖಾಸಗಿ ಅನುದಾನಿತ ಕಾಲೇಜುಗಳಿಗೆ ಸಂಬಂಧಿಸಿದಂತೆ, ನಿಗಧಿತ ಬೋಧನಾ ಶುಲ್ಕ ಮತ್ತು ಪ್ರಯೋಗಾಲಯ ಶುಲ್ಕಗಳನ್ನು ಸಂಗ್ರಹಿಸಿ ಜಮಾ ಮಾಡುವ ಬಗ್ಗೆ ಸರ್ಕಾರದ ಅಧಿಸೂಚನೆ ಸಂಖ್ಯೆ; ಇಡಿ 139 ಯುಪಿಸಿ 2014, ದಿನಾಂಕ:18.10.2014 ರಲ್ಲಿ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) 2003ರ ನಿಯಮ 18(4)ಕ್ಕೆ ತಿದ್ದುಪಡಿ ಆದೇಶವನ್ನು ಹೊರಡಿಸಲಾಗಿದ್ದು, ಅದರಂತೆ ಕ್ರಮ ವಹಿಸಲು ಸೂಚಿಸಿದೆ.
7. ಚಿತ್ರಕಲಾ ಕಾಲೇಜುಗಳಿಗೆ ಸಂಬಂಧಿಸಿದಂತೆ ಪರೀಕ್ಷಾ ಶುಲ್ಕಗಳನ್ನು ರೂ.1000 ಕ್ಕೆ ಹಾಗೂ ಪ್ರವೇಶಾತಿ ಶುಲ್ಕಗಳನ್ನು ಈಗಿರುವ ಶುಲ್ಕ ರೂ.200ರ ಬದಲಾಗಿ ರೂ.500 ಗಳಿಗೆ ಹೆಚ್ಚಿಸುವಂತೆ ಸೂಚಿಸಲಾಗಿದೆ ಹಾಗೂ ಸದರಿ ಶುಲ್ಕಗಳನ್ನು ಆಯಾಯ ಕಾಲೇಜುಗಳು ನೇರವಾಗಿ ಕನ್ನಡ ವಿಶ್ವವಿದ್ಯಾಲಯ, ಹಂಪಿ ಇಲ್ಲಿಗೆ ಸಂದಾಯ ಮಾಡಲು ಸೂಚಿಸಲಾಗಿದೆ. (ಸರ್ಕಾರದ ಪತ್ರಸಂಖ್ಯೆ : ಇಡಿ 71 ಡಿಸಿಇ 2009, ದಿನಾಂಕ: 09.05.2019 ರ ನಡವಳಿಯನ್ವಯ)
8. ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಬಿ.ಎ., ಬಿ.ಕಾಂ., ಬಿ.ಬಿ.ಎ. ಬಿಎಸ್ಸಿ, ಬಿ.ಸಿ.ಎ, ಬಿ.ಎಸ್.ಡಬ್ಲ್ಯೂ ಹಾಗೂ ಇತರೆ ಸ್ನಾತಕ ಕೋರ್ಸುಗಳು, ಕಾನೂನು ಮತ್ತು ಚಿತ್ರಕಲಾ ಕೋರ್ಸ್‌ಗಳಿಗೆ ಮೇಲಿನಂತೆ ಶುಲ್ಕಗಳನ್ನು ವಸೂಲಿ ಮಾಡಲು ಸೂಚಿಸಲಾಗಿದೆ.

**(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ:
ರಾಜ್ಯದ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

..3,

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ಶಿಕ್ಷಣ ಕಲ್ಯಾಣ ನಿಧಿ, ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ರಾಷ್ಟ್ರೀಯ ಶಿಕ್ಷಕರ ಕಲ್ಯಾನ ಪ್ರತಿಷ್ಠಾನ, ಶಿಕ್ಷಕರ ಸದನ, ಕೆಂಪೇಗೌಡ ರಸ್ತೆ, ಬೆಂಗಳೂರು-560 002.
5. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಆಯುಕ್ತರು, ಹಿಂದುಳಿದ ್ರಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು.
7. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ.
8. Project Director, State Scholarship Portal, Centre for e-Governance
    a. DPAR (e-Governance), Gate 2, 1st Floor, Room #110, MS Building, Bengaluru-560001
9. ಪ್ರಧಾನ ಕಾರ್ಯದರ್ಶಿಗಳು, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ, ನಂ.೨೬, ರೆಡ್‌ಕ್ರಾಸ್, ಭವನ, ಒಂದನೇ ಮಹಡಿ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು-೫೬೦ ೦೦೧.
10. ರಾಜ್ಯ ಕಾರ್ಯದರ್ಶಿಗಳು, ದಿ ಭಾರತ್ ಸ್ಕೌಟ್ಸ್ &ಗೈಡ್ಸ್, ಕರ್ನಾಟಕ, ಶಾಂತಿ ಗೃಹ, ನಂ.೩೯, ಅರಮನೆ ರಸ್ತೆ, ಬೆಂಗಳೂರು-೫೬೦ ೦೦೧.
11. ಕಛೇರಿ ಪ್ರತಿ.